ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

15

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಪರಿಷತ್

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ

ದಿನಾಂಕ : DATE : 07/12/2020

### ‘ಕಲಾಪ ಮುಂದೂಡಲು ಸಭಾ ನಾಯಕರೇ ಸಲಹೆ ನೀಡಿದ್ದರು’

ಪ್ರಜಾವಾಣಿ ವಾರ್ತೆ 7/12/20



ಬೆಂಗಳೂರು: ‘ವಿಧಾನಮಂಡಲದ ಕಳೆದ ಅಧಿವೇಶನದಲ್ಲಿ ವಿಧಾನ ಪರಿಷತ್ ಕಲಾಪವನ್ನು ಅನಿರ್ದಿಷ್ಟ ಅವಧಿಯವರೆಗೆ ಮುಂದೂಡುವಂತೆ ಸಭಾ ನಾಯಕ ಕೋಟ ಶ್ರೀನಿವಾಸ ಪೂಜಾರಿ ಸೇರಿದಂತೆ ಆಡಳಿತ ಪಕ್ಷದ ಹಲವರು ಸಲಹೆ ನೀಡಿದ್ದರು’ ಎಂದು ವಿಧಾನ ಪರಿಷತ್ ಸಭಾಪತಿ ಕೆ. ಪ್ರತಾಪಚಂದ್ರ ಶೆಟ್ಟಿ ಅವರು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಎಸ್. ಸುರೇಶ್ ಕುಮಾರ್ ಅವರಿಗೆ ಬರೆದ ಪತ್ರದಲ್ಲಿ ತಿಳಿಸಿದ್ದಾರೆ.

ಪ್ರತಾಪಚಂದ್ರ ಶೆಟ್ಟಿ

ಸೆ. 26ರಂದು ರಾತ್ರಿ 10.50ಕ್ಕೆ ವಿಧಾನ ಪರಿಷತ್ ಕಲಾಪ ಅಂತ್ಯಗೊಂಡಿತ್ತು. ಪರಿಷತ್‌ನಲ್ಲಿ ತಡರಾತ್ರಿ 1 ಗಂಟೆಯವರೆಗೂ ಕಲಾಪ ನಡೆದಿತ್ತು. ಆ ಬಳಿಕ ಕಲಾಪವನ್ನು ಅನಿರ್ದಿಷ್ಟ ಅವಧಿಯವರೆಗ ಮುಂದೂಡಲಾಗಿತ್ತು. ಮಸೂದೆಗಳ ಅಂಗೀಕಾರ ಬಾಕಿ ಇರುವಾಗಲೇ ಕಲಾಪ ಮುಂದೂಡಿದ್ದಕ್ಕೆ ಟ್ವಿಟರ್‌ನಲ್ಲಿ ಆಕ್ಷೇಪಿಸಿದ್ದ ಸುರೇಶ್ ಕುಮಾರ್, ‘ಸಭಾಪತಿಯವರ ನಡೆ ನಿಗೂಢ, ಅಂಪೈರ್ ಎಂದೂ ಹೀಗಿರಬಾರದು’ ಎಂದು ಟ್ವೀಟ್ ಮಾಡಿದ್ದರು